ಅ) ಕಳೆದ 2 ವರ್ಷಗಳಲ್ಲಿ ಕುಟುಂಬ ನಿಯಂತ್ರಣ ಯೋಜನೆಯ ಲಾಭ ಪಡೆದವರ ಸಂಖ್ಯೆ ಎಷ್ಟು ?

ಇ) ಕುಟುಂಬ ಮತ್ತು ಜನಸಂಖ್ಯೆ ನಿಯಂತ್ರಣ ಪಾಲಿಸಲು ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ?

ಈ) ಜನಸಂಖ್ಯಾ ನಿಯಂತ್ರಣವನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಕೈಗೊಂಡಿರುವ ಕಾರ್ಯಕ್ರಮಗಳು ಯಾವುವು ?

ಡಾ|| ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಇಲ್ಲ.

ಆ) ವಿವಿಧ ಕುಟುಂಬ ಕಲ್ಯಾಣ ಯೋಜನೆಗಳ ವಿಧಾನಗಳನ್ನು ಅನುಸರಿಸಿದ ಕಾರಣ ಈ ಕೆಳಕಂಡ ಜನರು ಈ ಯೋಜನೆಗೆ ಒಳಪಟ್ಟಿರುತ್ತಾರೆ.

1998-99	11.42 ಲಕ್ಷ (ಅಂದಾಜು)
1999-2000	12.06 ಲಕ್ಷ (ಅಂದಾಜು)

ಇ) ಸಂತಾನೋತ್ಪತ್ತಿ ಹಾಗೂ ಮಕ್ಕಳ ಆರೋಗ್ಯ ಕಾರ್ಯಕ್ರಮವು ಕುಟುಂಬ ಕಲ್ಯಾಣ ಕಾರ್ಯಕ್ರಮಗಳ ಮೂಲ ಕಾರ್ಯಕ್ರಮವಾಗಿರುತ್ತದೆ. ಭಾರತೀಯ ಜನಸಂಖ್ಯಾ ಯೋಜನೆ 8 ಮತ್ತು 9ರ ಅಡಿಯಲ್ಲಿ ಮಹಿಳೆಯರ ಆರೋಗ್ಯ ಮತ್ತು ಕುಟುಂಬ ಕಲ್ಯಾಣಗಳಿಗಾಗಿ ಹಲವು ಅನುಕೂಲತೆ ಹಾಗೂ ಸೇವೆಗಳನ್ನು ಒದಗಿಸಲಾಗಿದೆ.

ಈ) ಸಂತಾನಹರಣ ಶಸ್ತ್ರ ಚಿಕಿತ್ಸೆ, ಐ.ಯು.ಡಿ., ಮಹಿಳೆಯರಿಗೆ ನುಂಗುವ ಗುಳಿಗೆಗಳು ಹಾಗೂ ಗಂಡಸರಿಗೆ ನಿರೋಧಗಳು ಈ ಸಾಧನಗಳು ಜನಸಂಖ್ಯೆಯನ್ನು ನಿಯಂತ್ರಿಸುವ ಕ್ರಮಗಳಾಗಿರುತ್ತವೆ. ಆರ್.ಸಿ.ಹೆಚ್ ಕಾರ್ಯಕ್ರಮದಡಿಯಲ್ಲಿ ಸುರಕ್ಷತಾ ಹೆರಿಗೆ, ಗರ್ಭಿಣಿ ಸ್ತ್ರೀಯರ ಆರೈಕೆ, ಲಸಿಕೆ ಕಾರ್ಯಕ್ರಮ, ಜನನಾಂಗದ ದ್ವಾರದ ಸೋಂಕು, ಲೈಂಗಿಕ ಸಂಪರ್ಕದ ಸೋಂಕು ಹಾಗೂ ಮಾಹಿತಿ, ಶಿಕ್ಷಣ ಮತ್ತು ಸಂಪರ್ಕ ಚಟುವಟಿಕೆಗಳ ಮೂಲಕ ಪ್ರಚಾರ ನೀಡುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಖಾಸಗಿ ವಿಶ್ವವಿದ್ಯಾನಿಲಯಗಳನ್ನು ಪ್ರಾರಂಭಿಸಲು ಅನುಮತಿ

2898 - ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ವಿದೇಶಗಳಲ್ಲಿರುವಂತೆ ಖಾಸಗಿ ವಿಶ್ವ ವಿದ್ಯಾಲಯಗಳನ್ನು ಪ್ರಾರಂಭಿಸಲು ಅನುಮತಿ ನೀಡುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆಯೆ ?

ಆ) ಹಾಗಿದ್ದಲ್ಲಿ, ಯಾವಾಗ ಅನುಮತಿ ನೀಡಲಾಗುವುದು? ಹಾಗೂ ಎಷ್ಟು ವಿಶ್ವವಿದ್ಯಾ ನಿಲಯಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಗುವುದು? ವಿವರ ನೀಡುವುದು?

ಇ) ಇಲ್ಲವಾದ್ದಲ್ಲಿ ಅನುಮತಿಯನ್ನು ನೀಡಲು ಇರುವ ತೊಂದರೆಗಳೇನು?

ಡಾ॥ ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಮಂತ್ರಿಗಳು) :

ಅ) ಅಧ್ಯಯನ ಮಾಡಲಾಗುತ್ತಿದೆ.

ಆ) ಅನ್ವಯಿಸುವುದಿಲ್ಲ.

ಇ) ಕೇಂದ್ರ ಸರ್ಕಾರದ ಪರಿಶೀಲನೆಯಲ್ಲಿದೆ.

ಗ್ರಾಮೀಣ ಪರಿಸರದ ಬಗ್ಗೆ ಪಠ್ಯ ಕ್ರಮಗಳಲ್ಲಿ ಅಳವಡಿಕೆ

2899 - ಶ್ರೀ ಎ.ಎಸ್. ಗುರುಸ್ವಾಮಿ (ಚಾಮುಂಡೇಶ್ವರಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮೀಣ ಪರಿಸರ ಮತ್ತು ನೈರ್ಮಲ್ಯ ಕುರಿತಾದ ವಿಷಯವನ್ನು ಪಠ್ಯಕ್ರಮದಲ್ಲಿ ತಯಾರಿಸಿ ಅಧ್ಯಯನಕ್ಕೆ ಬಿಡುಗಡೆ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಆ) ಈ ಬಗ್ಗೆ ಕೈಗೊಂಡ ಕ್ರಮಗಳೇನು?

ಇ) ಈ ಬಗ್ಗೆ ಯಾವುದಾದರೂ ಸಮಿತಿಯನ್ನು ನೇಮಕ ಮಾಡಲಾಗಿದೆಯೇ?

ಈ) ಹಾಗಿದ್ದಲ್ಲಿ ಸಮಿತಿಯು ನೀಡಿರುವ ಸಲಹೆಗಳೇನು?

ಉ) ಇದನ್ನು ಸರ್ಕಾರ ಯಾವಾಗ ಜಾರಿಗೆ ತರಲಾಗುವುದು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಆ) ಹೌದು, ಈಗಾಗಲೇ ಗ್ರಾಮೀಣ ಪರಿಸರ ಮತ್ತು ನೈರ್ಮಲ್ಯ ವಿಷಯವನ್ನು ಪಠ್ಯಕ್ರಮದಲ್ಲಿ ಅಳವಡಿಸಿದೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ 1 ರಿಂದ 10ನೇ ತರಗತಿವರೆಗೆ ಪಾಠಗಳನ್ನು ಅಳವಡಿಸಿದೆ. 1 ರಿಂದ 4ನೇ ತರಗತಿವರೆಗೆ ಪರಿಸರ ಅಧ್ಯಯನ ಎಂಬ ಪಠ್ಯಪುಸ್ತಕ ಜಾರಿಯಲ್ಲಿದೆ.

ಇ) ಈ) ಉ) ಕಂಡಿಕೆ ಅ ಮತ್ತು ಆ ಗೆ ನೀಡಿರುವ ಉತ್ತರದಿಂದ ಉದ್ಭವಿಸುವುದಿಲ್ಲ.

ವಯಸ್ಕರ ಶಿಕ್ಷಣ ಸಮಿತಿ ಕಾರ್ಯ ನಿರ್ವಹಣೆ

2900 - ಶ್ರೀ ಗುರುಸ್ವಾಮಿ ಎ.ಎಸ್ (ಚಾಮುಂಡೇಶ್ವರಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಜಾರಿಗೆ ತರಲಾದ ವಯಸ್ಕರ ಶಿಕ್ಷಣ ಪದ್ಧತಿಯ ಉದ್ದೇಶಗಳೇನು?